ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 39 ಮುನೋಮು 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 25-10-2021

## ಅಧಿಸೂಚನೆ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಅಭಿವೃದ್ಧಿಪಡಿಸಿರುವ ಇ-ಆಸ್ತಿ ತಂತ್ರಾಂಶವನ್ನು ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾವೇರಿ ತಂತ್ರಾಂಶದೊಂದಿಗೆ ಸಂಯೋಜಿಸಲು ಹಾಗೂ ಪ್ರಾಯೋಗಿಕವಾಗಿ (Pilot Programme Basis) ದೊಮ್ಮಲೂರು ಉಪ ವಿಭಾಗ ವ್ಯಾಪ್ತಿಯಲ್ಲಿ, ಹಾಗೂ ಸಿ.ವಿ.ರಾಮನ್ ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಮೇಲ್ಕಂಡ ಉಪವಿಭಾಗಗಳ ವಾರ್ಡ್‌ಗಳಲ್ಲಿ ನಗರ ಪಾಲಿಕೆಯು ಇ-ಆಸ್ತಿ ತಂತ್ರಾಂಶವನ್ನು ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸಿರುವುದರಿಂದ, ಇ-ಆಸ್ತಿ ತಂತ್ರಾಂಶವನ್ನು ಕಾವೇರಿ ತಂತ್ರಾಂಶದ ಜೊತೆಗೆ ಈ ಕೆಳಕಂಡ ವಾರ್ಡ್‌ಗಳಲ್ಲಿ ಈ ಕೂಡಲೇ ಜಾರಿಗೆ ಬರುವಂತೆ ಜೋಡಣೆ ಮಾಡಲು ಆದೇಶಿಸಿದೆ.

| ಕ್ರ. ಸಂ. | ವಿಧಾನ ಸಭಾ ಕ್ಷೇತ್ರ | ಉಪವಿಭಾಗ | ವಾರ್ಡ್ ಸಂಖ್ಯೆ ಮತ್ತು ಹೆಸರು |
|---|---|---|---|
| 1 | ಶಾಂತಿನಗರ | ದೊಮ್ಮಲೂರು | 89 – ಜೋಗುಪಾಳ್ಯ |
| 2 | | | 112 – ದೊಮ್ಮಲೂರು |
| 3 | | | 114 – ಅಗರಮ್ |
| 4 | | | 115 – ವನ್ನಾರ್ ಪೇಟೆ |
| 5 | ಸಿ.ವಿ.ರಾಮನ್ ನಗರ | ಸಿ.ವಿ.ರಾಮನ್ ನಗರ | 50 – ಬೆನ್ನಿಗಾನಹಳ್ಳಿ |
| 6 | | | 57 – ಸಿ.ವಿ.ರಾಮನ್ ನಗರ |
| 7 | | | 58 – ಹೊಸ ತಿಪ್ಪಸಂದ್ರ |
| 8 | | | 79 – ಸರ್ವಜ್ಞ ನಗರ |
| 9 | | ಜೀವನ್ ಭೀಮಾನಗರ | 80 – ಹೊಯ್ಸಳ ನಗರ |
| 10 | | | 88 – ಜೀವನ್ ಭೀಮಾನಗರ |
| 11 | | | 113 – ಕೋನೇನ ಅಗ್ರಹಾರ |

ಸಾರ್ವಜನಿಕರು ಇ-ಆಡಳಿತ ತಂತ್ರಾಂಶದ ಮೂಲಕ ಸಿದ್ಧಪಡಿಸಿರುವ ಖಾತಾ ಪ್ರಮಾಣ ಪತ್ರ ಹಾಗೂ ಉದ್ಧೃತ ಭಾಗ ಮತ್ತು ಕೈಬರಹದ ಸಹಿವುಳ್ಳ ಹಕ್ಕು ವರ್ಗಾವಣೆ ಉತ್ತರ ಪತ್ರವನ್ನು ನೋಂದಣಿಗಾಗಿ, ಉಪ ನೋಂದಣಿ ಕಛೇರಿಗೆ ಸಲ್ಲಿಸಿದ್ದಲ್ಲಿ, ಇವುಗಳನ್ನು ಪರಿಗಣಿಸದೇ, ಇ-ಆಸ್ತಿ ತಂತ್ರಾಂಶದ ನಮೂನೆ-'ಎ' ಮತ್ತು ನಮೂನೆ-'ಬಿ'ಯನ್ನು ಮಾತ್ರ ನೋಂದಣಿಗೆ ಪರಿಗಣಿಸಲು ಸಂಬಂಧಪಟ್ಟ ಉಪ ನೋಂದಣಾಧಿಕಾರಿಗಳಿಗೆ ಸೂಚಿಸಲಾಗಿದೆ. ಇದನ್ನು ಹೊರತುಪಡಿಸಿ ಬೇರೆ ಯಾವುದೇ ವಿಧಾನದಲ್ಲಿ ನೋಂದಣಿ ಮಾಡಿದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

([illegible]ವೆಂಕಟೇಶಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ನೋಂದಣಿ ಮತ್ತು ಮುದ್ರಾಂಕ)

ಇವರಿಗೆ: ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-ಇ-ಗೆಜೆಟ್‌ನಲ್ಲಿ ಪ್ರಕಟಣೆ ಮಾಡಲು ಕೋರಲಾಗಿದೆ.

ಪ್ರತಿಗಳು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ), ವಿಕಾಸಸೌಧ, ಬೆಂಗಳೂರು.
2) ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
3) ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರು, ಕಂದಾಯ ಭವನ, ಬೆಂಗಳೂರು.
4) ಜಿಲ್ಲಾ ನೋಂದಣಾಧಿಕಾರಿಗಳು, ಜಯನಗರ ನೋಂದಣಿ ಜಿಲ್ಲೆ, ಬೆಂಗಳೂರು.
5) ಉಪ ನೋಂದಣಾಧಿಕಾರಿ, ಉಪ ನೋಂದಣಿ ಕಛೇರಿ, ಶಾಂತಿನಗರ, ಬೆಂಗಳೂರು.
6) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ, ಭೂಮಿ & ಯು.ಪಿ.ಓ.ಆರ್) ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7) ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ, ನೋಂದಣಿ ಮತ್ತು ಮುದ್ರಾಂಕ) ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.